ಓ.ಎಸ್. ನಂಬರಃ 44/2023

ಡಿ. ಡಬ್ಲ್ಯೂಃ 1

(ಸಾಕ್ಷಿಗೆ ಪ್ರಮಾಣವಚನ ಭೋದಿಸಲಾಯಿತು, ತಾಃ 07-01-2026)

ಮುಂದುವರೆದ ಮುಖ್ಯ ವಿಚಾರಣೆಃ ಪ್ರತಿವಾದಿ ಪರ ಶ್ರೀ ಜೆ.ಡಿ.ಬಿ. ವಕೀಲರಿಂದ,

ನನ್ನ ತಾಯಿಯ ವರದಾ ಗ್ರಾಮೀಣ ಬ್ಯಾಂಕಿನ ಖಾತೆಯ ಪಾಸ್ ಪುಸ್ತಕವನ್ನು ಹಾಜರುಪಡಿಸಿದ್ದು, ಅದನ್ನು ನಿಡಿ-1 ಎಂದು, ನನ್ನ ತಾಯಿಗೆ ಸೇರಿದ ಅಂಚೆ ಇಲಾಖೆಯ ಉಳಿತಾಯ ಖಾತೆಯ ಹಾಜರುಪಡಿಸಿದ್ದು, ಅದನ್ನು ನಿಡಿ-2 ಎಂದು, ನನ್ನ ತಾಯಿಯ ಹೊನ್ನಾವರ ನಗರ ಸಹಕಾರಿ ಬ್ಯಾಂಕ್ ನಿಯಮಿತದ ಸದಸ್ಯತ್ವದ ಗುರುತಿನ ಚೀಟಿಯನ್ನು ಹಾಜರುಪಡಿಸಿದ್ದು, ಅದನ್ನು ನಿಡಿ-3 ಎಂದು, ನನ್ನ ತಾಯಿ ಹೊನ್ನಾವರ ನಗರ ಸಹಕಾರಿ ಬ್ಯಾಂಕ್ ನಿಯಮಿತ ಬ್ಯಾಂಕ್ ನಲ್ಲಿ ಸಾಲವನ್ನು ಮರುಪಾವತಿಸಿದ ಬಗ್ಗೆ ಎರಡು ರಶೀದಿಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ನಿಡಿ-4 ಮತ್ತು 5 ಎಂದು, PACL INDIA LIMITED ನನ್ನ ತಾಯಿಯ ಹೆಸರಿನಲ್ಲಿದ್ದ ಇನ್ಸುರೆನ್ಸ್ ನ ಬಾಂಡ್ ನ್ನು ಹಾಜರುಪಡಿಸಿದ್ದು, ಅದನ್ನು ನಿಡಿ-6 ಎಂದು, ಹೊನ್ನಾವರ ನಗರ ಸಹಕಾರಿ ಬ್ಯಾಂಕ್ ನಿಯಮಿತ ಬ್ಯಾಂಕ್ ರವರು ನನ್ನ ತಾಯಿಗೆ ನೀಡಿದ ಸಾಲದ ಎರಡು ನೋಟೀಸಿನ ಪ್ರತಿಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ನಿಡಿ-7 ಮತ್ತು 8 ಎಂದು, ನನ್ನ ತಾಯಿ ಮಲಪ್ರಭಾ ಗ್ರಾಮೀಣ ಬ್ಯಾಂಕಿನಲ್ಲಿ ಸಾಲ ಮರುಪಾವತಿಸಿದ ಬಗ್ಗೆ ನಾಲ್ಕು ರಶೀದಿಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ನಿಡಿ-9 ರಿಂದ 12 ಎಂದು, ದಾವಾ ಆಸ್ತಿಗೆ ಸಂಬಂಧಿಸಿದಂತೆ, 2025 ನೇ ಸಾಲಿನ ಹನ್ನೆರಡು ಪಹಣಿ ಪತ್ರಿಕೆಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ಕ್ರಮವಾಗಿ ನಿಡಿ-13 ರಿಂದ 24 ಎಂದು, ದಾವಾ ಆಸ್ತಿಗೆ ಸಂಬಂಧಿಸಿದಂತೆ, ಮ್ಯುಟೇಶನ್ ಎಂಟ್ರಿ ನಂ. ಟಿ 197/2021-2022 ನ್ನು ಹಾಜರುಪಡಿಸಿದ್ದು, ಅದನ್ನು ನಿಡಿ-25 ಎಂದು ಗುರುತಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆಗೆ ಪ್ರತಿವಾದಿ ಪರ ವಕೀಲರು ಕಾಲಾವಕಾಶ ಕೇಳಿದ್ದರಿಂದ ಮುಂದೂಡಲಾಯಿತು.

(ನನ್ನ ಹೇಳಿಕೆ ಪ್ರಕಾರ ಬಹಿರಂಗ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

ಓ. ಹೇ.ಕೇ. ಸರಿ ಇದೆ.

ಸಹಿ ಇದೆ.

ಹೆಚ್ಚುವರಿ ಸಿವಿಲ್ ಜಡ್ಜ, ಭಟ್ಕಳ